# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು **(ಕಾಲೋನಿ ಅಭಿವೃದ್ಧಿ)** ಕ್ರಿಯಾ ಯೋಜನೆಯನ್ನು ರೂಪಿಸಿ, ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:**
1. 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-222.
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 06.04.2017
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 151 ಎಂಡಿಎಸ್ 2016 ದಿನಾಂಕ: 04.07.2017.
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತದ ಪ್ರಸ್ತಾವನೆ ಸಂಖ್ಯೆ: ಅಸಂನಿ/ಮೂ.ಸೌ. ಕ್ರಿಯೋ/ಸಿಆರ್-177/2016-17 ದಿನಾಂಕ: 31.03.2017.

*~*~*~*~*

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2017-18 ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ-222ರಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು ರೂ.800.00ಕೋಟಿಗಳ ಕ್ರಿಯಾ ಯೋಜನೆಯನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುವುದೆಂದು ಘೋಷಿಸಿರುತ್ತಾರೆ.**

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ 2016-17ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಈ ಯೋಜನೆಯನ್ನು 2017-18ನೇ ಸಾಲಿಗೆ ಮುಂದುವರೆಸಿ ಆದೇಶಿಸಿದೆ. ಈ ಯೋಜನೆಗೆ ಪ್ರಸಕ್ತ ಆರ್ಥಿಕ ವರ್ಷ 2017-18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4225-03-277-2-10(386) ರಡಿ ರೂ.500.00 ಕೋಟಿ ಅನುದಾನ ಒದಗಿಸಲಾಗಿದ್ದು, ಇದರಲ್ಲಿ ಆಯವ್ಯಯ ಭಾಷಣದ ಕಾರ್ಯಕ್ರಮಕ್ಕೆ ರೂ.800.00ಕೋಟಿಗಳ ಕ್ರಿಯಾ ಯೋಜನೆ ತಯಾರಿಸಿ ಅನುಮೋದಿಸಲು ಇದಕ್ಕಾಗಿ ರೂ.400.00ಕೋಟಿಗಳನ್ನು ಮೀಸಲಿರಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರು ರಾಜ್ಯದ ಎಲ್ಲಾ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ, ನಗರವ್ಯಾಪ್ತಿಯಲ್ಲಿನ Notified & Non Notified ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿದ್ದು, ಪ್ರಮುಖ ಮೂಲ ಸೌಕರ್ಯಗಳಿಂದ ವಂಚಿತರಾಗಿರುವ ಸ್ಥಳಗಳಲ್ಲಿ ಇದೊಂದು ವಿಶೇಷ ಯೋಜನೆಯಡಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

....2